ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/218/ಭಾ.ಸ್ಕೌ. ಗೈಡ್ಸ್/2020-21 (ಭಾಗ-2)

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು,
ದಿನಾಂಕ: 22.01.2025.

**ಅಧಿಕೃತ ಜ್ಞಾಪನ**

ವಿಷಯ: ಬೀರನಹಳ್ಳಿ ಅಡ್ಡ ರಸ್ತೆ, ಸೇಡಂ, ಕಲಬುರಗಿ ಜಿಲ್ಲೆಯಲ್ಲಿ ನಡೆಯುವ "ಶ್ರೀ ಕೊತ್ತಲ ಬಸವೇಶ್ವರ ಭಾರತೀಯ ಸಂಸ್ಕೃತಿ ಉತ್ಸವ" ಕ್ಕೆ ರೋವರ್ ಮತ್ತು ರೇಂಜರ್ಸ್‌ಗಳನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ: ರಾಜ್ಯ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರವರ ಪತ್ರ ಸಂಖ್ಯೆ: BSG/SHQ/2138/2024-25, ದಿನಾಂಕ: 31-12-2024.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 28-01-2025 ರಿಂದ 07.02.2025 ರವರೆಗೆ "ಶ್ರೀ ಕೊತ್ತಲ ಬಸವೇಶ್ವರ ಭಾರತೀಯ ಸಂಸ್ಕೃತಿ ಉತ್ಸವ" ವನ್ನು ಬೀರನಹಳ್ಳಿ ಅಡ್ಡ ರಸ್ತೆ, ಸೇಡಂ, ಕಲಬುರಗಿ ಇಲ್ಲಿ ಆಯೋಜಿಸಲಾಗಿರುತ್ತದೆ. ಸದರಿ ಸಾಂಸ್ಕೃತಿಕ ಜಾಗತೀಕ ಉತ್ಸವದಲ್ಲಿ 30 ಲಕ್ಷಕ್ಕೂ ಹೆಚ್ಚು ಜನರು ಮತ್ತು ವಿದ್ಯಾರ್ಥಿಗಳು ಭಾಗವಹಿಸಲಿದ್ದು, ಶಿಕ್ಷಣ, ಕಲೆ ಮತ್ತು ಸಂಸ್ಕೃತಿ, ಅತ್ಮ ನಿರ್ಭರ ಭಾರತ, ಮಕ್ಕಳ ಅಭಿವೃದ್ಧಿ, ಮಹಿಳಾ ಸಬಲೀಕರಣ, ಕೃಷಿ ವಿಜ್ಞಾನ ಮತ್ತು ತಂತ್ರಜ್ಞಾನ ಮುಂತಾದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರು ಉತ್ಸವದಲ್ಲಿ ಭಾಗವಹಿಸಿ ಪ್ರದರ್ಶನ ನೀಡಲಿದ್ದಾರೆ.

ತತ್ಸಂಬಂಧವಾಗಿ "ಶ್ರೀ ಕೊತ್ತಲ ಬಸವೇಶ್ವರ ಭಾರತೀಯ ಸಂಸ್ಕೃತಿ ಉತ್ಸವ" ಕ್ಕೆ ಸೇವಾ ಕರ್ತವ್ಯಕ್ಕಾಗಿ ಸ್ವ-ಇಚ್ಛೆಯಿಂದ ಭಾಗವಹಿಸುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ರೋವರ್ ಮತ್ತು ರೇಂಜರ್ಸ್‌ಗಳನ್ನು ಅನುಬಂಧದಲ್ಲಿ ಲಗತ್ತಿಸಿರುವ ಅವಶ್ಯಕವಿರುವ ಸಾಮಗ್ರಿಗಳು ಹಾಗೂ ಸಮವಸ್ತ್ರದೊಂದಿಗೆ ಭಾಗವಹಿಸುವ ರೋವರ್ ಮತ್ತು ರೇಂಜರ್ಸ್‌ಗಳಿಗೆ ಅನುಮತಿ ನೀಡಲಾಗಿದೆ. ಮುಂದುವರೆದು, ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಅಧ್ಯಾಪಕರುಗಳಿಗೆ "ಅನ್ಯಕಾರ್ಯ ನಿಮಿತ್ತ" ಮಂಜೂರು ಮಾಡಲಾಗಿದೆ.

| ದಿನಾಂಕ (ಅವಧಿ) | ವರದಿ ಮಾಡಿಕೊಳ್ಳುವ ದಿನಾಂಕ ಮತ್ತು ಸ್ಥಳ |
|---|---|
| 28-01-2025 ರಿಂದ 07.02.2025 (11 ದಿನಗಳು) | 26-01-2025 ರಂದು ಸಂಜೆ: 4.00 ಗಂಟೆ ಒಳಗೆ, ಬೀರನಹಳ್ಳಿ ಅಡ್ಡ ರಸ್ತೆ, ಸೇಡಂ, ಕಲಬುರಗಿ ಜಿಲ್ಲೆ. |

ಸ್ವಯಂ ಸೇವಕರಾಗಿ ಸೇವೆ ಸಲ್ಲಿಸುವ ರೋವರ್ಸ್-ರೇಂಜರ್ಸ್‌ಗಳಿಗೆ ಗುರುತಿನ ಚೀಟಿಯನ್ನು ನೀಡಲು ವಿದ್ಯಾರ್ಥಿಗಳ ಪಾಸ್‌ಪೋರ್ಟ್ ಸೈಜ್ ಸಮವಸ್ತ್ರ ಫೋಟೋ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯನ್ನು ತೆಗೆದುಕೊಂಡು ಹೋಗುವುದು ಕಡ್ಡಾಯವಾಗಿರುತ್ತದೆ. ಸದರಿ ಕಾರ್ಯಕ್ರಮಕ್ಕೆ ಹೋಗಿ ಬರುವ ಪ್ರಯಾಣ ಭತ್ಯೆಯನ್ನು ಆಯಾಯ ಕಾಲೇಜುಗಳ ರೋವರ್-ರೇಂಜರ್ ನಿಧಿಯಿಂದ ಭರಿಸಲು ಸೂಚಿಸಲಾಗಿದೆ.

.......2

ಮುಂದುವರೆದು ವಿದ್ಯಾರ್ಥಿಗಳ ಸುರಕ್ಷತಾ ದೃಷ್ಟಿಯಿಂದ ಕಾಲೇಜು ಶಿಕ್ಷಣ ಇಲಾಖೆಯ ಕಲಬುರಗಿ ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ಜಿಲ್ಲಾ ಲೀಡ್ ಕಾಲೇಜಿನ ಪ್ರಾಂಶುಪಾಲರು ಸದರಿ ಕಾರ್ಯಕ್ರಮಕ್ಕೆ ಭೇಟಿ ನೀಡಿ ಕಾಲೇಜು ಶಿಕ್ಷಣ ಇಲಾಖೆಯಿಂದ ಭಾಗವಹಿಸುವ ವಿದ್ಯಾರ್ಥಿಗಳ ಸುರಕ್ಷತಾ ಕ್ರಮಗಳ ಬಗ್ಗೆ ನಿಗಾವಹಿಸಲು ಸೂಚಿಸಲಾಗಿದೆ.

**ಪ್ರಾಂಶುಪಾಲರು ಕೈಗೊಳ್ಳಬೇಕಾದ ಅಗತ್ಯ ಕ್ರಮಗಳು:**

- "ಶ್ರೀ ಕೊತ್ತಲ ಬಸವೇಶ್ವರ ಭಾರತೀಯ ಸಂಸ್ಕೃತಿ ಉತ್ಸವ" ದಲ್ಲಿ ಸ್ವ ಇಚ್ಛೆಯಿಂದ ಭಾಗವಹಿಸುವ ಸೇವಾ ನಿರತ ವಿದ್ಯಾರ್ಥಿಗಳ ಪೋಷಕರಿಂದ ಒಪ್ಪಿಗೆ ಪತ್ರವನ್ನು ಪಡೆದುಕೊಳ್ಳತಕ್ಕದ್ದು.
- ವಿದ್ಯಾರ್ಥಿನಿಯರ ಸುರಕ್ಷತೆಯ ಹಿತದೃಷ್ಟಿಯಿಂದ ರೇಂಜರ್ಸ್ ವಿದ್ಯಾರ್ಥಿಗಳು ಪಾಲ್ಗೊಳ್ಳುವ ಕಾಲೇಜುಗಳಿಂದ ಕಡ್ಡಾಯವಾಗಿ ಮಹಿಳಾ ಅಧ್ಯಾಪಕರನ್ನು ನಿಯೋಜಿಸಿ, ಅಗತ್ಯ ಸುರಕ್ಷತಾ/ ರಕ್ಷಣಾ ಕ್ರಮಗಳನ್ನು ಕಡ್ಡಾಯವಾಗಿ ಅನುಸರಿಸುವುದು.
- ವಿದ್ಯಾರ್ಥಿಗಳ ಸುರಕ್ಷತೆಯ ಹಿತದೃಷ್ಟಿಯಿಂದ ಸ್ಕೌಟ್ಸ್ & ಗೈಡ್ಸ್‌ನ ಮುಖ್ಯಸ್ಥರ ಅನುಮತಿ ಇಲ್ಲದೇ ಉದ್ದೇಶಿತ ಕಾರ್ಯಕ್ರಮ/ ಸ್ಥಳವನ್ನು ಹೊರತುಪಡಿಸಿ ಇತರೆ ಸ್ಥಳಗಳಿಗೆ ಭೇಟಿ ನೀಡಲು ಅನುಮತಿ ಇರುವುದಿಲ್ಲ.
- ವಿದ್ಯಾರ್ಥಿಗಳ ತಂಡದೊಂದಿಗೆ ತೆರಳುವ ರೇಂಜರ್ಸ್/ ರೋವರ್ಸ್ ಲೀಡರ್‌ಗಳು ಹೆಚ್ಚಿನ ಮಾಹಿತಿಗಾಗಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಜಿಲ್ಲಾ ಸಂಸ್ಥೆ, ಕಲಬುರಗಿ, ಇವರನ್ನು ಸಂಪರ್ಕಿಸುವುದು.

**ಅಡಕ: ಕಾಲೇಜುಗಳ ಪಟ್ಟಿ.**

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1) ಮಾನ್ಯ ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ.
2) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ-ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ-ತಮ್ಮ ವ್ಯಾಪ್ತಿಗೆ ಬರುವ ಸಂಬಂಧಿಸಿದ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಸಂಬಂಧಿಸಿದ ಸಂಬಂಧಿಸಿದ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಜಂಟಿ ನಿರ್ದೇಕರ ಮುಖಾಂತರ.
4) ರಾಜ್ಯ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ, # 39 ಶಾಂತಿ ಗೃಹ, ಪ್ಯಾಲೇಸ್ ರಸ್ತೆ, ಬೆಂಗಳೂರು-1.
5) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು– ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
6) ಶ್ರೀ ಆರ್.ಶ್ರೀಕಾಂತ್, ಸಮನ್ವಯಾಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
7) ಕಛೇರಿ ಪ್ರತಿ